**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

***2017 ಹಾಗೂ 2018 ಹಾಗೂ2019 ನೇ ಕ್ಯಾಲೆಂಡರ್ ವರ್ಷದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ವಿವಿಧ ವಿಭಾಗಗಳಲ್ಲಿ ನೀಡುವ ಸಹಾಯಧನಕ್ಕೆ ನೇರ ಅರ್ಹತೆ ಹೊಂದಿರುವ ಚಲನಚಿತ್ರಗಳ ಪೈಕಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರ್ಮಾಪಕರು ನಿರ್ಮಿಸಿರುವ ಚಲನಚಿತ್ರಗಳಿಗೆ ವಿಶೇಷ ಪ್ರೋತ್ಸಾಹ ನೀಡುವ ಬಗ್ಗೆ.***

2017 ಹಾಗೂ 2018 ಹಾಗೂ 2019ನೇ ಕ್ಯಾಲೆಂಡರ್ ವರ್ಷದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ವಿವಿಧ ವಿಭಾಗಗಳಲ್ಲಿ ನೇರ ಅರ್ಹತೆ ಹೊಂದಿರುವ ಅಂದರೆ ರಾಜ್ಯ ಪ್ರಶಸ್ತಿ/ರಾಷ್ಟ್ರ ಪ್ರಶಸ್ತಿ ಪಡೆದ ಚಲನಚಿತ್ರಗಳು, ರಾಷ್ಟ್ರಮಟ್ಟದಲ್ಲಿ ಸ್ವರ್ಣ ಮತ್ತು ರಜತ ಕಮಲ ಪ್ರಶಸ್ತಿ ಪಡೆದ ಚಲನಚಿತ್ರಗಳು, ಭಾರತೀಯ ಪನೋರಮ ವಿಭಾಗಕ್ಕೆ ಆಯ್ಕೆಯಾದ ಚಿತ್ರಗಳು ಮತ್ತು FIAPF ನಿಂದ ಮನ್ನಣೆ ಪಡೆದ ಯಾವುದೇ ಅಧಿಕೃತ ಅಂತರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲಿ ಆಯ್ಕೆಯಾಗಿ ಪ್ರದರ್ಶನಗೊಂಡ ಚಲನಚಿತ್ರಗಳ ಪೈಕಿ ಇತರೆ ವರ್ಗದವರ ಪಾಲುದಾರಿಕೆ ಇಲ್ಲದೆ, ಸಂಪೂರ್ಣವಾಗಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ನಿರ್ಮಾಪಕರ ಒಡೆತನದ ನಿರ್ಮಾಣ ಸಂಸ್ಥೆಗಳಿಂದ ಚಲನಚಿತ್ರಗಳು ನಿರ್ಮಿತವಾಗಿದ್ದಲ್ಲಿ ಅಂತಹ ಚಲನಚಿತ್ರಗಳಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನೀಡುವ ಸಹಾಯಧನದ ಜೊತೆಗೆ ಹೆಚ್ಚುವರಿಯಾಗಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಯಡಿ 5 ಲಕ್ಷ ರೂ.ಗಳ ವಿಶೇಷ ಪ್ರೋತ್ಸಾಹ ಧನವನ್ನು ನೀಡಲಾಗುತ್ತದೆ.

ಈ ಹಿನ್ನೆಲೆಯಲ್ಲಿ 2017, 2018 ಹಾಗೂ 2019ನೇ ಕ್ಯಾಲೆಂಡರ್ ವರ್ಷದಲ್ಲಿ ಮೇಲ್ಕಂಡ ಯಾವುದೇ ವಿಭಾಗದಲ್ಲಿ ನೇರ ಅರ್ಹತೆ ಪಡೆದಿರುವ ಚಲನಚಿತ್ರಗಳ ಪೈಕಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ನಿರ್ಮಾಪಕರು ನಿರ್ಮಿಸಿರುವ ಚಲನಚಿತ್ರಗಳಿಗೆ ಅನ್ವಯಿಸುವಂತೆ, 5 ಲಕ್ಷ ರೂ.ಗಳ ವಿಶೇಷ ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನಿಸಿದೆ.

ಅರ್ಜಿಯ ಜೊತೆಗೆ ನಿಗದಿತ ನಮೂನೆಯ ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಪಾನ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳ ಸಹಿತ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ಖುದ್ದಾಗಿ ಇಲಾಖೆಗೆ ಸಲ್ಲಿಸಬಹುದಾಗಿದೆ. ಜೇಷ್ಠತೆ ಆಧಾರದ ಮೇಲೆ ಅರ್ಜಿಗಳನ್ನು ಪ್ರೋತ್ಸಾಹಧನಕ್ಕೆ ಪರಿಗಣಿಸಲಾಗುವುದು.

ಅರ್ಜಿ ನಮೂನೆಗಳನ್ನು ಉಪನಿರ್ದೇಶಕರು, ಚಲನಚಿತ್ರ ವಿಭಾಗ ಇಲ್ಲಿ ಖುದ್ದಾಗಿ ಪಡೆಯಬಹುದು ಅಥವಾ ಇಲಾಖಾ ವೆಬ್‌ಸೈಟ್ Karnatakainformation.gov.in ನಲ್ಲಿ ಅರ್ಜಿಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. **ಭರ್ತಿ ಮಾಡಿದ ಅರ್ಜಿಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ) ಬೆಂಗಳೂರು – 560001 ಈ ವಿಳಾಸಕ್ಕೆ ಕಚೇರಿಯ ಅವಧಿಯಲ್ಲಿ ಸಲ್ಲಿಸಬಹುದು.**

ಆಯುಕ್ತರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ಬೆಂಗಳೂರು.